ಕರ್ನಾಟಕ ಸರ್ಕಾರ

ದಿನಾಂಕ: 20-5-2017

# ರೈತರ ಆತ್ಮಹತ್ಯೆ ಪರಿಹಾರಕ್ಕೆ ಕೈಸಾಲವನ್ನು ಪರಿಗಣಿಸಬೇಕು – ಸಿದ್ದರಾಮಯ್ಯ



ಮೈಸೂರು,ಮೇ.20. – ಸಾಲ ತೀರಿಸಲಾಗದೆ ಆತ್ಮಹತ್ಯೆ ಮಾಡಿಕೊಳ್ಳುವ ಎಲ್ಲಾ ರೈತ ಕುಟುಂಬಗಳಿಗೂ 5 ಲಕ್ಷ ರೂ. ಪರಿಹಾರ, ಉಚಿತ ವೈದ್ಯಕೀಯ ಸೇವೆ ಹಾಗೂ ಅವರ ಮಕ್ಕಳಿಗೆ ಉನ್ನತ ಶಿಕ್ಷಣದ ವರೆಗೂ ಉಚಿತ ಶಿಕ್ಷಣ ನೀಡಬೇಕು. ವಸತಿ ಶಾಲೆಗಳಲ್ಲಿ ನೇರವಾಗಿ ಪ್ರವೇಶ ನೀಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಶನಿವಾರ ಸರ್ಕಾರಿ ಅತಿಥಿಗೃಹದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳ ಪ್ರಗತಿ ಪರಿಶೀಲನೆ ಸಭೆ ನಡೆಸಿದ ಅವರು, ರೈತರು ಬ್ಯಾಂಕು, ಸೊಸೈಟಿಗಳಲ್ಲಿ ಮಾತ್ರವಲ್ಲ, ಕೈಸಾಲ ಮಾಡಿ ತೀರಿಸಲಾಗದೆ ಆತ್ಮಹತ್ಯೆ ಮಾಡಿಕೊಂಡರು ಸಹ ಪರಿಹಾರಕ್ಕೆ ಪರಿಗಣಿಸುವಂತೆ ತಿಳಿಸಿದರು.

ಬರದ ಹಿನ್ನೆಲೆಯಲ್ಲಿ ಮೈಸೂರು ನಗರ ಹಾಗೂ ಗ್ರಾಮೀಣ ಪ್ರದೇಶದ ಕುಡಿಯುವ ನೀರಿನ ಯೋಜನೆಗಳ ಪರಿಸ್ಥಿತಿಯನ್ನು ಪರಿಶೀಲಿಸಿದರು. ಜಿಲ್ಲೆಯ 31 ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಪೈಕಿ ಈಗಾಗಲೇ 14 ಪೂರ್ಣಗೊಂಡಿವೆ. ಇನ್ನೂ ಎರಡು

ಆರಂಭವಾಗಿಲ್ಲ. ಉಳಿದವು ಪ್ರಗತಿಯಲ್ಲಿವೆ. ಕೆಲವು ಜೂನ್, ಸೆಪ್ಟೆಂಬರ್ ಡಿಸೆಂಬರ್ ಮತ್ತು ಮುಂದಿನ ಮಾರ್ಚ್‌ನಲ್ಲಿ ಪೂರ್ಣಗೊಳ್ಳುತ್ತವೆ ಎಂದು ಅಧಿಕಾರಿಗಳು ಮಾಹಿತಿ ನೀಡಿದಾಗ, ಈ ಕಾಮಗಾರಿಗಳನ್ನು ಹೇಳಿದಂತೆ ಕಾಲಮಿತಿಯಲ್ಲಿ ಪೂರ್ಣಗೊಳಿಸಲೇ ಬೇಕು ಎಂದು ಎಚ್ಚರಿಕೆ ನೀಡಿದರು.

ಮೈಸೂರು ನಗರದಲ್ಲಿ 65 ವಾರ್ಡ್‌ಗಳ ಪೈಕಿ 56 ವಾರ್ಡ್‌ಗಳಲ್ಲಿ ಪ್ರತಿನಿತ್ಯ ನೀರು ಕೊಡುತ್ತಿದ್ದೇವೆ. 9 ವಾರ್ಡ್‌ಗಳಲ್ಲಿ ಎರಡು ದಿನಗಳಿಗೊಮ್ಮೆ ಕೊಡುತ್ತಿದ್ದೇವೆ ಎಂದು ಮಹಾನಗರ ಪಾಲಿಕೆ ಆಯುಕ್ತರು ಮಾಹಿತಿ ನೀಡಿದರು.

9 ವಾರ್ಡ್‌ಗಳಿಗೆ ನೀರಿನ ಸಮಸ್ಯೆ ಇರುವ ಬಗ್ಗೆ ಮುಖ್ಯಮಂತ್ರಿಗಳು ತೀವ್ರ ವಿಚಾರಣೆ ನಡೆಸಿದರು. ಜೆಸ್ಕೊ ಕೆಲಸ ಪೂರ್ತಿ ಆಗಿರಲಿಲ್ಲ ಇದರಿಂದ ಸಮಸ್ಯೆಯಾಗಿದೆ. ನರ್ಮ್ ಯೋಜನೆಯಡಿ 2ನೇ ಹಂತದ ಕೆಲಸ ನಡೆಯುತ್ತಿದೆ ಇನ್ನು 10 ತಿಂಗಳಲ್ಲಿ ಸಮಸ್ಯೆ ಇತ್ಯರ್ಥಪಡಿಸಲಾಗುವುದು ಎಂದು ಅಧಿಕಾರಿಗಳು ಭರವಸೆ ನೀಡಿದರು.

ಎಲ್ಲಾ ವಾರ್ಡ್‌ಗಳಲ್ಲೂ ಏಕ ರೀತಿಯಲ್ಲಿ ಪ್ರತಿನಿತ್ಯ ನೀರು ಕೊಡಬೇಕು. ಇದಕ್ಕೆ ಪೈಪ್‌ಲೈನ್ ಮತ್ತಿತರ ಮೂಲಸೌಕರ್ಯ ಬೇಕಾದರೆ ಯೋಜನೆ ತಯಾರಿಸಿ, ಹಣ ಒದಗಿಸಲಾಗುವುದು ಎಂದು ಮುಖ್ಯಮಂತ್ರಿಗಳು ಹೇಳಿದರು.

ರಮಾಭಾಯಿನಗರ ಹಾಗೂ ಸುತ್ತಮುತ್ತಲಿನ ಹಳ್ಳಿಗಳಿಗೆ ಮಹಾನಗರ ಪಾಲಿಕೆಯಿಂದಲೂ ನೀರು ಸಿಗುತ್ತಿಲ್ಲ. ಗ್ರಾಮ ಪಂಚಾಯಿತಿಯಿಂದಲೂ ನೀರು ಸಿಗುತ್ತಿಲ್ಲ. ಸುಮಾರು 5000 ಮನೆಗಳಿವೆ. ಈ ಹಳ್ಳಿಗಳಿಗೆ ನೀರು

ಕೊಡಲು ಯೋಜನೆ ತಯಾರಿಸಿ, ನೀರು ಕೊಡಬೇಕು ಎಂದು ಮುಡಾ ಹಾಗೂ ಪಾಲಿಕೆ ಅಧಿಕಾರಿಗಳಿಗೆ ಮುಖ್ಯಮಂತ್ರಿಗಳು ಸೂಚನೆ ನೀಡಿದರು.

ಬೆಳೆ ಪರಿಹಾರದ ಹಣ ಬಿಡುಗಡೆಯಾದ ತಕ್ಷಣ ರೈತರಿಗೆ ತಲುಪಿಸಬೇಕು. ವಿಳಂಬ ಆಗಬಾರದು ಎಂದು ಜಿಲ್ಲಾಧಿಕಾರಿಗಳಿಗೆ ತಿಳಿಸಿದರು. ಮೈಸೂರು ಜಿಲ್ಲೆಯಲ್ಲಿ ಈ ವರೆಗೆ 80646 ರೈತರ ಬ್ಯಾಂಕ್ ಖಾತೆಗೆ ಪರಿಹಾರದ ಮೊತ್ತ ನೀಡಿದ್ದೇವೆ. ಇನ್ನೂ ಸುಮಾರು 10 ಸಾವಿರ ರೈತರಿಗೆ ಬಾಕಿ ಇದೆ. ಈ ಪೈಕಿ ಸುಮಾರು 5 ಸಾವಿರ ರೈತರ ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಆಗಿಲ್ಲ. ಮೇ ಅಂತ್ಯದೊಳಗೆ ಆಧಾರ್ ಸೀಡಿಂಗ್ ಮಾಡಿ ಪರಿಹಾರ ವಿತರಿಸಲಾಗುವುದು. ಮುಂಗಾರು ಹಂಗಾಮಿಗೆ 33.72 ಕೋಟಿ ರೂ. ಪರಿಹಾರ ಹಣವನ್ನು ನೀಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಮಹಾತ್ಮಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ರಾಮನಗರ ಮತ್ತು ಕೋಲಾರ ಜಿಲ್ಲೆಯಲ್ಲಿ ಉತ್ತಮ ಪ್ರಗತಿಯಾಗಿದೆ. ಮೈಸೂರು ಜಿಲ್ಲೆಯಲ್ಲಿ ಯಾಕೆ ಆಗಿಲ್ಲ ಎಂದು ತರಾಟೆಗೆ ತೆಗೆದುಕೊಂಡ ಮುಖ್ಯಮಂತ್ರಿಗಳು, ಈ ಯೋಜನೆಯಡಿ 21 ಕಾರ್ಯಕ್ರಮಗಳನ್ನು ತೆಗೆದುಕೊಳ್ಳಬಹುದು. ಹೆಚ್ಚು ಅನುದಾನ ಬಳಸಿಕೊಂಡರೆ ಹೆಚ್ಚಿನ ಆಸ್ತಿ ಸೃಷ್ಟಿಸಿದಂತೆ ಆಗುತ್ತದೆ ಎಂದು ಹೇಳಿದರು.

ಸಭೆಯಲ್ಲಿ ಲೋಕೋಪಯೋಗಿ ಮತ್ತು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಹೆಚ್.ಸಿ. ಮಹದೇವಪ್ಪ, ಸಂಸದರಾದ ಆರ್. ಧ್ರುವನಾರಾಯಣ್, ಶಾಸಕರಾದ ಜಿ.ಟಿ.ದೇವೇಗೌಡ,

ಎಂ.ಕೆ.ಸೋಮಶೇಖರ್, ಹೆಚ್.ಪಿ. ಮಂಜುನಾಥ್, ಕಳಲೆ ಕೇಶವಮೂರ್ತಿ, ವರುಣ ವಿಧಾನಸಭಾ ಕ್ಷೇತ್ರದ ವಸತಿ ಯೋಜನೆಗಳ ಉಸ್ತುವಾರಿ ಸಮಿತಿ ಅಧ್ಯಕ್ಷರಾದ ಡಾ. ಯತೀಂದ್ರ ಸಿದ್ದರಾಮಯ್ಯ, ಪ್ರಾದೇಶಿಕ ಆಯುಕ್ತರಾದ ಎಂ.ವಿ. ಜಯಂತಿ, ಜಿಲ್ಲಾಧಿಕಾರಿ ರಂದೀಪ್ ಡಿ., ಜಿಲ್ಲಾ ಪಂಚಾಯತ್ ಸಿ.ಇ.ಒ. ಪಿ. ಶಿವಶಂಕರ್, ಪೊಲೀಸ್ ಆಯುಕ್ತರಾದ ಡಾ. ಸುಬ್ರಮಣ್ಯೇಶ್ವರ ರಾವ್, ಪೊಲೀಸ್ ಅಧೀಕ್ಷಕರಾದ ರವಿ ಡಿ. ಚನ್ನಣ್ಣನವರ್ ಮತ್ತಿತರರು ಉಪಸ್ಥಿತರಿದ್ದರು.

-----------------